# ಕರ್ನಾಟಕ ವಿಧಾನ ಪರಿಷತ್ತು

## ಲಘು ಪ್ರಕಟಣೆ ಭಾಗ –2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಮಂಗಳವಾರ, ದಿನಾಂಕ: 21ನೇ ನವೆಂಬರ್, 2017

ಸಂಖ್ಯೆ: 39

ದಿನಾಂಕ:17.11.2017ರಂದು ಮಾನ್ಯ ಸದಸ್ಯರಾದ ಶ್ರೀ ರಘುನಾಥರಾವ್ ಮಲ್ಕಾಪೂರೆಯವರು ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 407(3917)ರಲ್ಲಿ, ರಾಜ್ಯದಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವತಿಯಿಂದ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಹಾಗೂ ಖರೀದಿಸಲು ಅನುಸರಿಸಿರುವ ಮಾನದಂಡ ಹಾಗೂ ಖರೀದಿಗೆ ತಗುಲಿದ ವೆಚ್ಚ ಮತ್ತು ಈವರೆಗೆ ವಿದ್ಯಾರ್ಥಿಗಳಿಗೆ ವಿತರಿಸಲಾಗಿರುವ ಲ್ಯಾಪ್‌ಟಾಪ್‌ಗಳ ಬಗ್ಗೆ ಸದನದಲ್ಲಿ ಪ್ರಸ್ತಾಪಿಸಿದ್ದು ಈ ಬಗ್ಗೆ ಪರಿಶೀಲಿಸಲು ಮಾನ್ಯ ಉನ್ನತ ಶಿಕ್ಷಣ ಸಚಿವರು ಸದನ ಸಮಿತಿಯನ್ನು ರಚಿಸಲು ಒಪ್ಪಿಗೆ ನೀಡಿದ್ದರ ಹಿನ್ನಲೆಯಲ್ಲಿ ಮಾನ್ಯ ಸಭಾಪತಿಯವರು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 242(ಎ) ರೀತ್ಯಾ ವಿಶೇಷ ಸದನ ಸಮಿತಿಯನ್ನು ನೇಮಕ ಮಾಡಿರುತ್ತಾರೆ.

ಆದುದರಿಂದ ಸದನದಲ್ಲಿ ಪ್ರಸ್ತಾಪಿಸಿ, ಚರ್ಚಿಸಲಾದ ಅಂಶಗಳನ್ನು ಆಧರಿಸಿ, ಪರಿಶೀಲಿಸಿ ಹದಿನೈದು ದಿನಗಳೊಳಗೆ ವರದಿಯನ್ನು ಸಲ್ಲಿಸಲು ಈ ಕೆಳಕಂಡ ಸದಸ್ಯರನ್ನೊಳಗೊಂಡಂತೆ ವಿಶೇಷ ಸದನ ಸಮಿತಿಯನ್ನು ರಚಿಸಲಾಗಿರುತ್ತದೆ.

| | | |
|---|---|---|
| 1. | ಶ್ರೀ ಕೆ.ಸಿ. ಕೊಂಡಯ್ಯ | ಅಧ್ಯಕ್ಷರು |
| 2. | ಶ್ರೀ ಐವನ್ ಡಿ'ಸೋಜಾ | ಸದಸ್ಯರು |
| 3. | ಶ್ರೀ ರಮೇಶ್ ಬಾಬು | ಸದಸ್ಯರು |
| 4. | ಶ್ರೀ ರಘುನಾಥ್ ರಾವ್ ಮಲ್ಕಾಪೂರೆ | ಸದಸ್ಯರು |
| 5. | ಶ್ರೀ ಶರಣಪ್ಪ ಮಟ್ಟೂರ | ಸದಸ್ಯರು |
| 6. | ಶ್ರೀ ಅರುಣ ಶಹಾಪುರ | ಸದಸ್ಯರು |
| 7. | ಶ್ರೀ ಆರ್. ಪ್ರಸನ್ನ ಕುಮಾರ್ | ಸದಸ್ಯರು |

... 2

## ಪರಿಶೀಲಿಸಬೇಕಾದ ಅಂಶಗಳು

1. 2016-17ನೇ ಸಾಲಿನಲ್ಲಿ ಕಾಲೇಜು ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸಲು ಖರೀದಿಸಿರುವ ಬಗ್ಗೆ.
2. 2017-18ನೇ ಸಾಲಿನಲ್ಲಿ ಸರ್ಕಾರಿ ಪದವಿ, ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ವಿಭಾಗಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರಥಮ ವರ್ಷದ ಎಲ್ಲಾ ಸಮುದಾಯದ ವಾರ್ಷಿಕ ವರಮಾನ 2.50 ಲಕ್ಷಕ್ಕಿಂತ ಕಡಿಮೆ ಇರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ಸರಬರಾಜು ಮಾಡುವ ಬಗ್ಗೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ(ಪ್ರ)

ವಿಧಾನ ಪರಿಷತ್ತಿನ ಎಲ್ಲಾ ಮಾನ್ಯ ಸದಸ್ಯರುಗಳ ಮಾಹಿತಿಗಾಗಿ.